ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:DCE/PP/PRO/33/2023-PP

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-560 001,
ದಿನಾಂಕ:12.09.2023.
13

## ಸುತ್ತೋಲೆ

ವಿಷಯ: ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕೇತರರ ಬಡ್ತಿ ಬಗ್ಗೆ ಪ್ರಸ್ತಾವನೆ ಸಲ್ಲಿಸುವಾಗ ಪರಿಶೀಲಿಸಬೇಕಾದ ಅಂಶಗಳ ಬಗ್ಗೆ.

* * * *

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ, ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕೇತರರ ಬಡ್ತಿಗಾಗಿ ಸಲ್ಲಿಸಲಾಗುತ್ತಿರುವ ಪ್ರಸ್ತಾವನೆಗಳಲ್ಲಿ ಹಲವಾರು ನ್ಯೂನತೆಗಳಿರುವ ಪ್ರಯುಕ್ತ ಪ್ರಸ್ತಾವನೆ ಅನುಮೋದಿಸುವಲ್ಲಿ ವಿಳಂಬವಾಗುತ್ತಿರುವುದಲ್ಲದೇ ಅನಗತ್ಯ ಪತ್ರ ವ್ಯವಹಾರಕ್ಕೆ ಕಾರಣವಾಗುತ್ತಿರುತ್ತದೆ. ಆದ ಕಾರಣ ಬಡ್ತಿ ಪ್ರಸ್ತಾವನೆಯನ್ನು ಸಲ್ಲಿಸುವಾಗ ಈ ಕೆಳಕಂಡ ಅಂಶಗಳ ಬಗ್ಗೆ ಕೂಲಂಕಷವಾಗಿ ಪರಿಶೀಲಿಸತಕ್ಕದ್ದು:

1) ಕರ್ನಾಟಕ ಸರ್ಕಾರಿ ನೌಕರರ ಜ್ಯೇಷ್ಠತಾ ನಿಯಮಗಳು -1957ರ ರೀತ್ಯಾ ಒಂದು ಆಡಳಿತ ಮಂಡಳಿಯ ವ್ಯಾಪ್ತಿಗೆ ಒಳಪಡುವ ಕಾಲೇಜಿನಲ್ಲಿ (ಗಳಲ್ಲಿ) ಕರ್ತವ್ಯ ನಿರ್ವಹಿಸುತ್ತಿರುವ ಬೋಧಕೇತರ ಸಿಬ್ಬಂದಿಗಳ ತಾತ್ಕಾಲಿಕ ಜ್ಯೇಷ್ಠತಾ ಪಟ್ಟಿಯನ್ನು ಪ್ರತಿ ವರ್ಷವೂ ಡಿಸೆಂಬರ್ 31ಕ್ಕೆ ಅಂತ್ಯಗೊಂಡಂತೆ ತಾತ್ಕಾಲಿಕ ಜ್ಯೇಷ್ಠತಾ ಪಟ್ಟಿಗಳನ್ನು ಸಿದ್ಧಪಡಿಸಿ ಆಕ್ಷೇಪಣೆಗಳನ್ನು ಆಹ್ವಾನಿಸಿ, ಸ್ವೀಕೃತವಾದ ಆಕ್ಷೇಪಣೆಗಳನ್ನು ನಿಯಮಾನುಸಾರ ಪರಿಶೀಲಿಸಿ ಸಾಧಾರಣವಾಗಿ ಮಾರ್ಚ್ 31ರೊಳಗಾಗಿ ಅಂತಿಮ ಜ್ಯೇಷ್ಠತಾ ಪಟ್ಟಿಗಳನ್ನು ಪ್ರಕಟಿಸತಕ್ಕದ್ದು. ಒಂದು ಆಡಳಿತ ಮಂಡಳಿಯ ಅಡಿಯಲ್ಲಿ ಒಂದಕ್ಕಿಂತ ಹೆಚ್ಚು ಕಾಲೇಜುಗಳು ಇದ್ದಲ್ಲಿ ಎಲ್ಲಾ ಕಾಲೇಜುಗಳಲ್ಲಿನ ಬೋಧಕೇತರ ಸಿಬ್ಬಂದಿಗಳನ್ನು ಒಳಗೊಂಡಂತೆ ಒಂದೇ ಜೇಷ್ಠತಾ ಪಟ್ಟಿಯನ್ನು ಸಿದ್ಧಪಡಿಸಬೇಕು. ಹಾಗೂ ಬೋಧಕೇತರ ಸಿಬ್ಬಂದಿಗಳ ಬಡ್ತಿಗಾಗಿ ಪ್ರಸ್ತಾವನೆಯನ್ನು ಕಳುಹಿಸುವಾಗ ಇತ್ತೀಚಿನ ಜ್ಯೇಷ್ಠತಾ ಪಟ್ಟಿಯನ್ನು ಸಲ್ಲಿಸಬೇಕು.

2) ಒಂದು ಆಡಳಿತ ಮಂಡಳಿಯಡಿಯಲ್ಲಿ ಒಂದಕ್ಕಿಂತ ಹೆಚ್ಚು ಕಾಲೇಜುಗಳು ಒಳಪಡುತ್ತಿದ್ದ ಸಂದರ್ಭದಲ್ಲಿ, ಅಂತಹ ಎಲ್ಲಾ ಕಾಲೇಜುಗಳಲ್ಲಿ ಮಂಜೂರಾದ/ಕರ್ತವ್ಯ ನಿರ್ವಹಿಸುತ್ತಿರುವ/ಖಾಲಿ ಹುದ್ದೆಗಳ (sanctioned/working/vacant) ಪ್ರತ್ಯೇಕ ಹಾಗೂ ಕ್ರೋಢೀಕೃತ ಮಾಹಿತಿಯನ್ನು (consolidated) ಆಡಳಿತ ಮಂಡಳಿಯ ಅಧ್ಯಕ್ಷರು/ಆಡಳಿತಾಧಿಕಾರಿಗಳು ಸಹಿ ಮಾಡಿ ಪ್ರಸ್ತಾವನೆಯೊಂದಿಗೆ ಲಗತ್ತಿಸಿರಬೇಕು.

3) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಅಂಗವಿಕಲರಿಗೆ ಬಡ್ತಿಯಲ್ಲಿ ಮೀಸಲಾತಿಯನ್ನು ನೀಡಲು ಸರ್ಕಾರದ ಆದೇಶದಲ್ಲಿ ಅವಕಾಶ ಕಲ್ಪಿಸಿರುವುದರಿಂದ ಜ್ಯೇಷ್ಠತಾ ಪಟ್ಟಿಯಲ್ಲಿ ಸಿಬ್ಬಂದಿಗಳ ಜಾತಿ ಹಾಗೂ ಅಂಗವೈಕಲ್ಯತೆ ಬಗ್ಗೆ ಕಡ್ಡಾಯವಾಗಿ ಮಾಹಿತಿಯನ್ನು ದಾಖಲಿಸಬೇಕು.

...2

4) ಒಂದು ವೇಳೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಅಂಗವಿಕಲರು ಯಾರೂ ಇಲ್ಲದ ಪಕ್ಷದಲ್ಲಿ ಈ ಕುರಿತಂತೆ ಆಡಳಿತ ಮಂಡಳಿಯ ಅಧ್ಯಕ್ಷರು/ಆಡಳಿತಾಧಿಕಾರಿಗಳು ಸಹಿ ಮಾಡಿರುವ ಪ್ರಮಾಣ ಪತ್ರವನ್ನು ಪ್ರಸ್ತಾವನೆಯಲ್ಲಿ ಕಡ್ಡಾಯವಾಗಿ ಲಗತ್ತಿಸಿರಬೇಕು ಹಾಗೂ ಠರಾವಿನಲ್ಲಿ ಈ ಬಗ್ಗೆ ಸ್ಪಷ್ಟವಾಗಿ ದಾಖಲೆಗಳನ್ನು ನಮೂದಿಸಿರಬೇಕು.

5) ಯಾವುದೇ ಬೋಧಕೇತರ ಹುದ್ದೆಯನ್ನು ಬ್ಯಾಕ್‌ಲಾಗ್ ನೇಮಕಾತಿಗೆ ಮೀಸಲಿಟ್ಟಿರುವ ಪಕ್ಷದಲ್ಲಿ ಈ ಕುರಿತು ಪರಿಶೀಲಿಸಿರುವ ಬಗ್ಗೆ ದೃಢೀಕರಣವನ್ನು ನೀಡಬೇಕು. ಒಂದು ವೇಳೆ ಅಂತಹ ಯಾವುದೇ ಬ್ಯಾಕ್‌ಲಾಗ್ ಇಲ್ಲದಿದ್ದಲ್ಲಿ, ಈ ಕುರಿತಂತೆ ಆಡಳಿತ ಮಂಡಳಿ ದೃಢೀಕರಣ ನೀಡಬೇಕು. ಅಧ್ಯಕ್ಷರು/ ಆಡಳಿತಾಧಿಕಾರಿಗಳು ಸಹಿ ಮಾಡಿರುವ ದೃಢೀಕರಣವನ್ನು ಪ್ರಸ್ತಾವನೆಯಲ್ಲಿ ಕಡ್ಡಾಯವಾಗಿ ಲಗತ್ತಿಸಿರಬೇಕು.

6) ಆಡಳಿತ ಮಂಡಳಿಯು ಠರಾವು ಕೈಗೊಂಡ ೦೩ ತಿಂಗಳ ಒಳಗಾಗಿ ಈ ಕಛೇರಿಗೆ ಪ್ರಸ್ತಾವನೆಯನ್ನು ಸಲ್ಲಿಸಬೇಕು.

7) ಬಡ್ತಿಗೆ ಅರ್ಹರಾದ ಸಿಬ್ಬಂದಿಗಳ ಸೇವಾವಹಿಯನ್ನು ಕಾಲೋಚಿತಗೊಳಿಸಿ ಸಲ್ಲಿಸಿರಬೇಕು.

ಮೇಲ್ಕಂಡ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ನ್ಯೂನತೆಗಳಿದ್ದಲ್ಲಿ, ಅವಶ್ಯಕ ಮಾಹಿತಿ/ದಾಖಲೆಗಳನ್ನು ಸಂಬಂಧಿಸಿದ ಆಡಳಿತ ಮಂಡಳಿಯಿಂದ ಪಡೆದು ಪ್ರಸ್ತಾವನೆಯನ್ನು ಈ ಕಛೇರಿಗೆ ಸಲ್ಲಿಸುವುದು. ಇಲ್ಲದಿದ್ದಲ್ಲಿ, ಪ್ರಸ್ತಾವನೆಯನ್ನು ಪರಿಗಣಿಸದೇ ಹಿಂದಿರುಗಿಸಲಾಗುವುದು ಹಾಗೂ ಇದರಿಂದಾಗುವ ವಿಳಂಬಕ್ಕೆ ತಮ್ಮನ್ನೇ ನೇರ ಜವಾಬ್ದಾರರನ್ನಾಗಿ ಮಾಡಲಾಗುವುದು.

**(ಟಿಪ್ಪಣಿ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)**

13/9

**ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು**

ಇವರಿಗೆ,

ಜಂಟಿ ನಿರ್ದೇಶಕರು,
ಪ್ರಾದೇಶಿಕ ಕಛೇರಿ,
ಕಾಲೇಜು ಶಿಕ್ಷಣ ಇಲಾಖೆ,
**ಬೆಂಗಳೂರು, ಮೈಸೂರು, ಶಿವಮೊಗ್ಗ,**
**ಮಂಗಳೂರು, ಧಾರವಾಡ & ಕಲಬುರಗಿ**

**ಪ್ರತಿಯನ್ನು:**

1. ಮಾಹಿತಿ ಅಧಿಕಾರಿಗಳು, ಮಾಹಿತಿ & ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು- ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಕ್ತ ಕ್ರಮಕ್ಕಾಗಿ.
2. ಕಛೇರಿ ಪ್ರತಿ.